# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 488 |
| 2. | ಮಾನ್ಯ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ(ಪದವೀಧರರ ಕ್ಷೇತ್ರ) |
| 3. | ಉತ್ತರಿಸಬೇಕಾದ ದಿನಾಂಕ | 19.02.2024 |
| 4. | ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

<table>
<tr><th>ಕ್ರ. ಸ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬಾಗಲಕೋಟೆ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಇಲ್ಲದಿರುವುದರಿಂದ ಆ ಭಾಗದ ಅನೇಕ ಪ್ರತಿಭಾವಂತ ವಿದ್ಯಾರ್ಥಿಗಳು ಬೇರೆ ಜಿಲ್ಲೆಗಳಿಗೆ ಅಥವಾ ಖಾಸಗಿ ವೈದ್ಯಕೀಯ ಕಾಲೇಜುಗಳಿಗೆ ಹೊಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ. ಈ ಕುರಿತು ಸರ್ಕಾರದ ಕ್ರಮಗಳೇನು;</td><td rowspan="4">ಬಂದಿದೆ.<br><br>ರಾಜ್ಯದ ಪ್ರತೀ ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಬೇಕೆಂಬುದು ಸರ್ಕಾರದ ನೀತಿಯಾಗಿರುತ್ತದೆ.<br><br>ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00 ಕೋಟಿಗಳ ಅನಾವರ್ತಕ ವೆಚ್ಚ ಹಾಗೂ ವಾರ್ಷಿಕ ರೂ.60.00 ಕೋಟಿಗಳ ಆವರ್ತಕ ವೆಚ್ಚದ ಅವಶ್ಯಕತೆ ಇರುತ್ತದೆ.<br><br>ಅದರಂತೆ ಅನುದಾನದ ಲಭ್ಯತೆಯನ್ನು ಆಧರಿಸಿ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮ ವಹಿಸಲಾಗುವುದು.<br><br>ಪ್ರಸ್ತುತ ವರ್ಷದಲ್ಲಿ ಬಾಗಲಕೋಟೆ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸದ್ಯಕ್ಕೆ ಇರುವುದಿಲ್ಲ.</td></tr>
<tr><td>ಆ)</td><td>ಬಾಗಲಕೋಟೆ ನಗರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ನಿರ್ಮಾಣ ಮಾಡಲು ಇರುವ ಅಡಚಣೆಗಳೇನು;( ವಿವರ ನೀಡುವುದು)</td></tr>
<tr><td>ಇ</td><td>ಬಾಗಲಕೋಟೆ ನಗರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ನಿರ್ಮಾಣ ಮಾಡುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು;(ಮಾಹಿತಿ ನೀಡುವುದು)</td></tr>
<tr><td>ಈ</td><td>ಬಾಗಲಕೋಟೆ ನಗರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡುವ ಕುರಿತು ಸರ್ಕಾರದ ನಿಲುವೇನು?</td></tr>
</table>

ಸಂಖ್ಯೆ: ಎಂಇಡಿ 77 ಎಂಎಂಸಿ 2024

(ಡಾ|| ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು